ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ರಾಜ್ಯದಲ್ಲಿ ಸರ್ಕಾರಿ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲೆಗಳ ಸಂಖ್ಯೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

527 (518) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಅನುದಾನಿತ ಮತ್ತು ಅನುದಾನರಹಿತ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳಲ್ಲಿ ಆಟದ ಮೈದಾನ ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಸದರಿ ಶಾಲೆಗಳಲ್ಲಿ ದೈಹಿಕ ಶಿಕ್ಷಕರು ಇರುವ ಶಾಲೆಗಳ ಸಂಖ್ಯೆ ಎಷ್ಟು ; (ಸರ್ಕಾರಿ ಅನುದಾನಿತ, ಅನುದಾನ ರಹಿತ ಪ್ರತ್ಯೇಕವಾಗಿ ವಿವರ ನೀಡುವುದು)

(ಈ) ಆಟದ ಮೈದಾನ ಇಲ್ಲದ ಶಾಲೆಗಳ ವಿದ್ಯಾರ್ಥಿಗಳ ದೈಹಿಕ ಸಾಮರ್ಥ್ಯ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಆಟದ ಮೈದಾನದ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಹಾಗೂ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)